ದಿ:10.02.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಭೋದಿಸಲಾಯಿತು.

ಪಾಟೀ ಸವಾಲು:-ವಾದಿ ಪರ ಶ್ರೀ.**K.S.P.,** ವಕೀಲರಿಂದ:-

ನಾನು ಪ್ರತಿವಾದಿಯ ಜೆಪಿಎ ಹೋಲ್ಡರ್ ಆಗಿ ಈ ದಾವೆಯಲ್ಲಿ ಸಾಕ್ಷಿ ನೀಡಿರುತ್ತೇನೆ . ನಾನು ಈಗ ದೊಣ್ಣೆಹಳ್ಳಿ ಗ್ರಾಮದಲ್ಲಿ ವಾಸವಿರುತ್ತೇನೆ . ನಾನು ಸರ್ಕಾರಿ ಇಲಾಖೆಯಲ್ಲಿ ಪ್ರ.ದ.ಸಹಾಯಕನಾಗಿ ನಿವೃತ್ತಿ ಆಗಿರುತ್ತೇನೆ . ನಾನು ದಾವಣಗೆರೆ ಸಾರಿಗೆ ಇಲಾಖೆಯಲ್ಲಿ ನಿವೃತ್ತಿ ಹೊಂದಿರುತ್ತೇನೆ . ಪ್ರತಿವಾದಿ ಸಲ್ಲಿಸಿದ ತಕರಾರಿನ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿ ಈಗ ಚೆನ್ನಾಗಿ ಇರುತ್ತಾರೆ ಎಂದರೆ ಸರಿಯಲ್ಲ. ನಮ್ಮ ತಾಯಿ ಆರೋಗ್ಯವಾಗಿದ್ದು , ನ್ಯಾಯಾಲಯಕ್ಕೆ ಬಂದು ಸಾಕ್ಷಿ ಹೇಳಲು ಯಾವುದೇ ತೊಂದರೆ ಇರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಯು ನ್ಯಾಯಾಲಯಕ್ಕೆ ಬಂದು ತಾವು ಸಾಕ್ಷಿ ಹೇಳಿದರೆ ಸತ್ಯಾಂತ ಹೊರಬೀಳುತ್ತದೆ ಎಂದು ನಾನು ಅವರ ಪರವಾಗಿ ಸಾಕ್ಷಿ ಹೇಳುತ್ತಿದ್ದೇನೆ ಎಂದರೆ

ಸರಿಯಲ್ಲ. ದಾವಾ ಆಸ್ತಿಯನ್ನು ಪ್ರತಿವಾದಿಯವರು ಸನ್ 1976 ರಲ್ಲಿ ಕ್ರಯಕ್ಕೆ ಪಡೆದುಕೊಂಡಿರುತ್ತಾರೆ . ನಾವು ಸನ್ 1976 ರಿಂದ ಇಲ್ಲಿಯವರೆಗೂ ದಾವಾ ಆಸ್ತಿ ಖಾತೆ ಬದಲಾವಣೆ ಮಾಡಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಮೂಲ ವಾರಸುದಾರು ವೀರಮ್ಮ ಮತ್ತು ಬಿ ಚಂದ್ರಪ್ಪ ರವರು ಇರುತ್ತಾರೆ ಎಂದರೆ ಸರಿಯಲ್ಲ. ಅವರಿಂದ ವಾದಿಯು ಸನ್ 1983-84 ರಲ್ಲಿ ಶುದ್ಧಕ್ರಯಕ್ಕೆ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ವಾದಿಯು ಸನ್ 1983-84 ರಿಂದ ಕ್ರಯಕ್ಕೆ ಪಡೆದ ಕಾಲದಿಂದಲೂ ಇಲ್ಲಿಯವರೆಗೂ ಸ್ವಾಧೀನ ಅನುಭವ ಇರುತ್ತಾರೆ ಎಂದರೆ ಸರಿ. ದಾವಾ ಆಸ್ತಿ ಒಟ್ಟು ವಿಸ್ತೀರ್ಣ 36 *51 ಅಡಿ ಇರುತ್ತದೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆಸಿ 18*51 ಇರುತ್ತದೆ ಎಂದು ಹೇಳುತ್ತಾರೆ . ವಾದಿಯವರು ದಾವಾ ಆಸ್ತಿಯ ಪಶ್ಚಿಮ ದಿಕ್ಕಿಗೆ 18*51 ಅಡಿ ಜಾಗದಲ್ಲಿ ಮನೆ ಕಟ್ಟಿಸಿಕೊಂಡು ಇರುತ್ತಾರೆ ಎಂದರೆ ಸಾಕ್ಷಿ ಅವರ ಜಾಗದಲ್ಲಿ ಕಟ್ಟಿಸಿಕೊಂಡು ಇರುತ್ತಾರೆ ಎಂದು ಹೇಳುತ್ತಾರೆ. ದಾವಾ ಆಸ್ತಿಯ ಪೂರ್ವ ದಿಕ್ಕಿಗೆ ಉಳಿದ ಆಸ್ತಿ 18*51 ಖಾಲಿ ಇದ್ದು , ವಾದಿಯೇ ಸ್ವಾಧೀನ ಇರುತ್ತಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿಪಶ್ಚಿಮ ದಿಕ್ಕಿಗೆ ವಾದಿಯವರು ಮನೆ ಕಟ್ಟಲು ಪಂಚಾಯತಿಯಿಂದ ಪರವಾನಗೆ ಪಡೆದುಕೊಂಡು ನಂತರ ಕಟ್ಟಿರುತ್ತಾರೆ ಎಂದರೆ ನನಗೆ ಗೋತ್ತಿಲ್ಲ . ಗ್ರಾಮ ಪಂಚಾಯತಿಯವರು ವಾದಿಯ ಎಲ್ಲಾ ದಾಖಲೆಗಳನ್ನು ಪರಿಶೀಲನೆ ಮಾಡಿ ನಂತರ ಪರವಾನಗೆ ಕಟ್ಟಿರುತ್ತಾರೆ ಎಂದರೆ ನನಗೆ ಗೋತ್ತಿಲ್ಲ .

(ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಪಾಟೀ ಸವಾಲಿಗೆ ಸಮಯ ಕೋರಿದ್ದು ಅಲಿಸಿ ಸಮಯ ನೀಡಲಾಯಿತು) _

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.**)**

ಓ ಹೇ ಕೇ ಸರಿ ಇದೆ

ಸಹಿ/-

ಸಿವಿಲ್ ನ್ಯಾಯಾಧೀಶರು, ಜಗಳೂರು